ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ, ಬೆಂಗಳೂರು

1ನೇ-4ನೇ ಮಹಡಿ, 5ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560001

ಕಛೇರಿ ದೂ.22392203, ಫ್ಯಾಕ್ಸ್: 22392206/07, ಮೇಲ್:kshrc2007@gmall.com.


ಹೆಚ್.ಆರ್.ಸಂಖ್ಯೆ:ಮಾ.ಹ.ಆ. 2965/10/20/2018 (B-3) ದಿನಾಂಕ 31-8-2020

ಇಂದ:

ವಿಲೇಖನಾಧಿಕಾರಿಗಳು,
ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ,
ಬೆಂಗಳೂರು.

ಇವರಿಗೆ:

ಜಿಲ್ಲಾಧಿಕಾರಿಗಳು,
ಹಾಸನ ಜಿಲ್ಲೆ.
ಹಾಸನ.

ವಿಷಯ: ಹೆಚ್.ಆರ್.ಸಿ ಸಂಖ್ಯೆ 2965/10/20/2018 (B-3)–ದೂರಿನ ಬಗ್ಗೆ.

****

ಪ್ರಕರಣವನ್ನು ದಿನಾಂಕ.26.08.2020 ರಂದು ಆಯೋಗದ ಮುಂದೆ ಮಂಡಿಸಿದಾಗ, ಆಯೋಗವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ

ಶ್ರೀ ಸಿದ್ದಲಿಂಗೇಗೌಡ, ವಿಶ್ವ ಮಾನವ ಹಕ್ಕುಗಳ ಸೇವಾ ಕೇಂದ್ರ, ಮಾವಿನಕೆರೆ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ ಅವರು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೆ ದೂರು ಸಲ್ಲಿಸಿ, ಹಾಸನ ನಗರ-ಡೈರಿ ವೃತ್ತದಲ್ಲಿ ಬಸ್ ತಂಗುದಾಣದಲ್ಲಿ ಶೌಚಾಲಯವಿಲ್ಲ. ವಿದ್ಯಾರ್ಥಿಗಳು, ನಾಗರೀಕರ ಮೇಲೆ ದುಷ್ಪರಿಣಾಮ ಮಾನವ ಹಕ್ಕುಗಳ ಉಲ್ಲಂಘನೆ ಆಗುತ್ತಿದೆ. ಈ ಬಗ್ಗೆ ಜಿಲ್ಲಾಧಿಕಾರಿಗಳು, ನಗರಸಭೆ-ಆಯುಕ್ತರು, ಕೆ.ಎಂ.ಎಫ್-ಹಾಸನ ಇವರಿಗೆ 2014ರಿಂದ ಅನೇಕ ಮನವಿಗಳನ್ನು ಸಲ್ಲಿಸಿದ್ದರೂ ಕ್ರಮ ಕೈಗೊಂಡಿಲ್ಲ. ದಯಮಾಡಿ ಸರ್ಕಾರಕ್ಕೆ, ಸಂಬಂಧಿಸಿದವರಿಗೆ ಆದೇಶ ನೀಡಿ ಅನುಕೂಲ ಕಲ್ಪಿಸಲು ವಿನಂತಿಸಿದ್ದಾರೆ.

ಪ್ರಕರಣದ ಬಗ್ಗೆ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ ಅವರು ಆಯೋಗಕ್ಕೆ ವರದಿ ಸಲ್ಲಿಸಿ, ಹಾಸನ ನಗರದ ಡೈರಿ ವೃತ್ತದಲ್ಲಿ ಬಸ್ ತಂಗುದಾಣ ಮತ್ತು ಶೌಚಾಲಯ ನಿರ್ಮಿಸುವ ಬಗ್ಗೆ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ, ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಹಾಸನ, ಪೌರಾಯುಕ್ತರು, ನಗರಸಭೆ, ಹಾಸನ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಹಾಸನ ರವರಿಗೆ ತಿಳಿಸಲಾಗಿರುತ್ತದೆ.

ಹಾಸನ ನಗರದ ಡೈರಿ ವೃತ್ತದಲ್ಲಿ ಮಾನ್ಯ ವಿಧಾನಪರಿಷತ್ ಸದಸ್ಯರ ಅನುದಾನದಲ್ಲಿ ಈಗಾಗಲೇ ಬಸ್ ತಂಗುದಾಣ ನಿರ್ಮಿಸಲಾಗಿರುತ್ತದೆ ಎಂಬುದಾಗಿ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಹಾಸನರವರು ವರದಿ ಸಲ್ಲಿಸಿದ್ದು, ಮತ್ತು ಶೌಚಾಲಯ ನಿರ್ಮಿಸುವ ಬಗ್ಗೆ ಕಾರ್ಯ ನಿರ್ವಹಣಾಧಿಕಾರಿಗಳು, ತಾಲ್ಲೂಕು, ಪಂಚಾಯತಿ, ಹಾಸನ ರವರಿಗೆ ಸೂಚಿಸಲಾಗಿದ್ದು, ಪ್ರಸ್ತಾಪಿತ ಪ್ರಕರಣವನ್ನು ಮುಕ್ತಾಯಗೊಳಿಸುವಂತೆ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ ಅವರು ಆಯೋಗವನ್ನು ಕೋರಿದ್ದಾರೆ.

ವರದಿಯ ಪ್ರತಿಯನ್ನು ದೂರುದಾರರ ಅಭಿಪ್ರಾಯಕ್ಕಾಗಿ ಕಳುಹಿಸಿದ್ದು, ಕೆಳಕಂಡಂತೆ ಅಭಿಪ್ರಾಯ ಸಲ್ಲಿಸಿದ್ದಾರೆ.

ವರದಿ ಅಪೂರ್ಣ, ಅನುಷ್ಠಾನವಾಗದ ವರದಿಯಾಗಿದೆ. ಅಧಿಕಾರಿಗಳು ಎಷ್ಟೊಂದು ಪರಿಜ್ಞಾನ ಇಲ್ಲದವರು ಎನ್ನುವುದಕ್ಕೆ ಇದು ಸಾಕ್ಷಿಯಾಗಿದೆ. ಪೌರಾಯುಕ್ತರು, ನಗರಸಭೆ-ಹಾಸನ ರವರು Toilet ನಿರ್ಮಿಸುವವರೆಗೂ ಈ ಪ್ರಕರಣ ಮುಕ್ತಾಯಗೊಳಿಸದೇ, ಖುದ್ದು ಇವರನ್ನು ವಿಚಾರಣೆ ಮಾಡಿ Toilet ನಿರ್ಮಿಸಲು ವಿನಂತಿಸಿದ್ದಾರೆ.

ದೂರು, ವರದಿ ಮತ್ತು ಅಭಿಪ್ರಾಯವನ್ನು ಪರಿಶೀಲಿಸಲಾಗಿ, ವರದಿಯಲ್ಲಿ ತಿಳಿಸಿರುವಂತೆ ಹಾಸನ ನಗರದ ಡೈರಿ ವೃತ್ತದಲ್ಲಿ ಶೌಚಾಲಯ ನಿರ್ಮಿಸಲು ನಿಗದಿತ ಕಾಲಮಿತಿಯಲ್ಲಿ ಪ್ರಾಮಾಣಿಕ ಕ್ರಮ ಕೈಗೊಳ್ಳುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಒಂದು ತಿಂಗಳ ಒಳಗಾಗಿ ಆಯೋಗಕ್ಕೆ ಅನುಸರಣಾ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ ಅವರಿಗೆ ಸೂಚಿಸಿದ್ದು, ಕೆಳಕಂಡಂತೆ ಅನುಪಾಲನಾ ವರದಿ ಸಲ್ಲಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ ಇವರ ಅಧ್ಯಕ್ಷತೆಯಲ್ಲಿ ದಿನಾಂಕ.13.08.2020ರಂದು ನಡೆದ ಸಭೆಯಲ್ಲಿ ಸರ್ಕಾರಿ ಇಂಜನಿಯರಿಂಗ್ ಕಾಲೇಜು ಆವರಣದ ಎಸ್.ಬಿ.ಐ ಬ್ಯಾಂಕ್ ಪಕ್ಕ ಖಾಲಿ ಇರುವ ಜಾಗದಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಹಾಗೂ ಸುತ್ತಮುತ್ತಲಿನ ಪರಿಸರ ನೈರ್ಮಲ್ಯೀಕರಣದ ಉದ್ದೇಶದಿಂದ ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತೀರ್ಮಾನಿಸಲಾಗಿರುತ್ತದೆ.

ಸಭೆಯ ನಿರ್ಣಾಯದಂತೆ ಹಾಸನ ನಗರದ ಡೈರಿ ವೃತ್ತದ ಸರ್ಕಾರಿ ಇಂಜನಿಯರಿಂಗ್ ಕಾಲೇಜು ಆವರಣದ ಎಸ್.ಬಿ.ಐ ಬ್ಯಾಂಕ್ ಪಕ್ಕದಲ್ಲಿ ಖಾಲಿ ಇರುವ ನಿವೇಶನದಲ್ಲಿ, ಸಾರ್ವಜನಿಕರ ಹಿತದೃಷ್ಟಿಯಿಂದ ಶೌಚಾಲಯ ನಿರ್ಮಾಣ ಮಾಡುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಪೌರಾಯುಕ್ತರು, ನಗರಸಭೆ, ಹಾಸನ ಮತ್ತು ಪ್ರಾಂಶುಪಾಲರು, ಸರ್ಕಾರಿ ಇಂಜನಿಯರಿಂಗ್ ಕಾಲೇಜು, ಹಾಸನ ಅವರನ್ನು ಕೋರಲಾಗಿದೆ ಎಂದು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿಕೋಶ, ಹಾಸನ ಅವರು ಆಯೋಗಕ್ಕೆ ವರದಿ ಸಲ್ಲಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ, ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಹಾಸನ ಜಿಲ್ಲಾಧಿಕಾರಿಗಳ ಕಛೇರಿ, ಹಾಸನ ಅವರು ಸಲ್ಲಿಸಿರುವ ಪುನರ್ ಪರಿಶೀಲನಾ ವರದಿಯನ್ನು ಪರಿಶೀಲಿಸಿ, ದಿನಾಂಕ.12.08.2020 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೆಗೆದುಕೊಂಡ ನಿರ್ಣಾಯದಂತೆ ಸರ್ಕಾರಿ ಇಂಜನಿಯರಿಂಗ್ ಕಾಲೇಜು ಆವರಣದ SBI ಬ್ಯಾಂಕ್ ಪಕ್ಕ ಖಾಲಿ ಇರುವ ಜಾಗದಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡಿ, ಅನುಸರಣಾ ವರದಿಯನ್ನು ಆಯೋಗಕ್ಕೆ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ ಅವರಿಗೆ ಸೂಚಿಸಿ, ಪ್ರತಿಯನ್ನು ಪೌರಾಯುಕ್ತರು, ನಗರ ಸಭೆ, ಹಾಸನ ಅವರಿಗೂ ಕಳುಹಿಸಿ, ಪ್ರಕರಣವನ್ನು ಮುಕ್ತಾಯಗೊಳಿಸಲಾಗಿದೆ.

Sd/-
(ಆರ್.ಕೆ.ದತ್ತ)
ಸದಸ್ಯರು

ಮೇಲ್ಕಂಡ ಆದೇಶದಂತೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿ, ಮುಕ್ತಾಯಗೊಳಿಸಲಾಗಿದೆ ಹಾಗೂ ಈ ಆದೇಶದ ಪತ್ರವನ್ನು ತಮ್ಮ ಮಾಹಿತಿಗಾಗಿ ಕಳುಹಿಸಲಾಗಿದೆ ಎಂದು ತಮಗೆ ಸೂಚಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,
2/9/2020
ಸಹಾಯಕ ವಿಲೇಖನಾಧಿಕಾರಿ,
ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ, ಬೆಂಗಳೂರು

ಪ್ರತಿಯನ್ನು:- 1)ಪೌರಾಯುಕ್ತರು, ನಗರ ಸಭೆ, ಹಾಸನ
2) ಶ್ರೀ ಸಿದ್ದಲಿಂಗೇಗೌಡ, ವಿಶ್ವ ಮಾನವ ಹಕ್ಕುಗಳ ಸೇವಾ ಕೇಂದ್ರ, ಮಾವಿನಕೆರೆ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ –ಮಾಹಿತಿಗಾಗಿ